ಕ್ರಾಂತಿಯಕಿದಿ
ಕಾಯಕಯೋಗಿ
KAYAKAYOGI-MORNING DAILY
ಕನ್ನಡ ದಿನಪತ್ರಿಕೆ
ಶನಿವಾರ
17 ಜುಲೈ 2021

ಕೆಆರ್‌ಎಸ್ ಸುತ್ತಮುತ್ತ 20 ಕಿ.ಮೀ. ವ್ಯಾಪ್ತಿಯಲ್ಲಿ ಕಲ್ಲು ಗಣಿಗಾರಿಕೆ ಸಂಪೂರ್ಣ ನಿಷೇಧಿಸುವಂತೆ ಒತ್ತಾಯ

ಮಂಡ್ಯ : ಕೃಷ್ಣರಾಜಸಾಗರ ಜಲಾಶಯದ ಸುತ್ತಮತ್ತ 20 ಕಿ.ಮೀ. ವ್ಯಾಪ್ತಿಯಲ್ಲಿ ಕಲ್ಲು ಗಣಿಗಾರಿಕೆ ಸಂಪೂರ್ಣ ನಿಷೇಧ ಮಾಡುವಂತೆ ಒತ್ತಾಯಿಸಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಅಶ್ವತ್ಥನಾರಾಯಣ ಅವರಿಗೆ ಬಿಜೆಪಿ ಮುಖಂಡರು ಮನವಿ ಸಲ್ಲಿಸಿದರು.

ಮುಖಂಡ ಸಿ.ಟಿ. ಮಂಜುನಾಥ್ ನೇತೃತ್ವದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಲು ನಿಯೋಗ ತೆರಳಿದ್ದುಘಿ, ಪಕ್ಷದ ಮುಖಂಡರನ್ನು ಭೇಟಿ ಮಾಡಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಲು ದಿನಾಂಕ ಗೊತ್ತುಪಡಿಸುವಂತೆ ಮನವಿ ಸಲ್ಲಿಸಿದರು.

ಗಣಿಗಾರಿಕೆಗೆ ಸಂಬಂಧಿಸಿದಂತೆ ಎಲ್ಲಾ ಆಗತ್ಯ ದಾಖಲಾತಿಗಳನ್ನು ಅಶ್ವತ್ಥನಾರಾಯಣ ಅವರಿಗೆ ಸಲ್ಲಿಸಿ, ಸಂಪೂರ್ಣ ಮಾಹಿತಿ ನೀಡಿದರಲ್ಲದೆ, ರಾಜಧನ, ದಂಡ ವಸೂಲಾತಿಗೂ ಕ್ರಮ ಕೈಗೊಳ್ಳಬೇಕಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಮನವರಿಕೆ ಮಾಡಿಕೊಟ್ಟು ಕನ್ನಂಬಾಡಿ ಹಿತದೃಷ್ಟಿಯಿಂದ ಗಣಿಗಾರಿಕೆ ಸಂಪೂರ್ಣ ನಿಷೇದಿಸುವಂತೆ ಒತ್ತಾಯಿಸಬೇಕು ಎಂದು ತಿಳಿಸಿದರು.

ನಿಯೋಗದಲ್ಲಿ ಮುಖಂಡರಾದ ಎಚ್.ಎನ್. ಮಂಜುನಾಥ್, ಉದಯ್‌ಕುಮಾರ್, ವರುಣ್, ಬೇಬಿ ಗ್ರಾಮಸ್ಥರು ಸೇರಿದಂತೆ ಇತರರು ಈ ಸಂದರ್ಭದಲ್ಲಿ ಹಾಜರಿದ್ದರು.

ಎಸ್‌ಎಸ್‌ಎಲ್‌ಸಿ ಪೂರ್ವಭಾವಿ ಪರೀಕ್ಷೆಯಲ್ಲಿ ಕಡಿಮೆ ಅಂಕ; ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿನಿ!

ಚಾಮರಾಜನಗರ: ಎಸ್‌ಎಸ್ ಎಲ್‌ಸಿ ಪೂರ್ವಭಾವಿ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದ ಹಿನ್ನಲೆಯಲ್ಲಿ ಟಾಪರ್ ವಿದ್ಯಾರ್ಥಿನಿ ಯೊಬ್ಬಳು ಮನನೊಂದು ನೇಣು ಬಿಗಿದು ಕೊಂಡು ಆತ್ಮಹತ್ಯೆ ಮಾಡಿ ಕೊಂಡಿರುವ ಘಟನೆ ಚಾಮರಾಜ ನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ಸಾಯಿಬಾಬಾ ಬಡಾವಣೆಯಲ್ಲಿ ನಡೆದಿದೆ.

ಕೊಳ್ಳೇಗಾಲ ಪಟ್ಟಣದ ಸಾಯಿಬಾಬಾ ಬಡಾವಣೆ ನಿವಾಸಿ ಯಾಗಿರುವ ಹನೂರು ಕಾಲೇಜಿನ ಕ್ರಿಸ್ತರಾಜ ಶಾಲೆಯ ಶಿಕ್ಷಕ ಸಂತೋಷ್ ಎಂಬುವವರ ಪುತ್ರಿ ಸಮನ್ವಿತ ಮೃತ ಬಾಲಕಿ. ಸಮನ್ವಿತ ಓದಿನಲ್ಲಿ ಸದಾ ಮುಂದಿದ್ದು ಪ್ರತೀ ಪರೀಕ್ಷೆ ಯಲ್ಲಿ ಶಾಲೆಯ ಟಾಪರ್ ಕೂಡ ಆಗಿದ್ದಳಂತೆ. ಇತ್ತೀಚೆಗೆ ನಡೆಸಲಾಗಿದ್ದ ಪೂರ್ವಭಾವಿ ಪರೀಕ್ಷೆಯಲ್ಲಿ ಸಮನ್ವಿತಾಳಿಗೆ ನಿರೀಕ್ಷಿತ ಅಂಕ ಬಾರದಿರುವುದು ಆತ್ಮಹತ್ಯೆಗೆ ಕಾರಣ ಎನ್ನಲಾಗಿದೆ. ವಿಷಯ ತಿಳಿದು ನಿಸರ್ಗ ವಿದ್ಯಾರ್ಥಿನಿಕೇತನ ಶಾಲೆ ಆಡಳಿತ ವರ್ಗ, ಮೃತ ವಿದ್ಯಾರ್ಥಿನಿ ಮನೆಗೆ ಭೇಟಿ ನೀಡಿ ಪಾಲಕರಿಗೆ ಸಾಂತ್ವನ ಹೇಳಿದ್ದಾರೆ.

ಅಲ್ಲದೆ ಆನ್ ಲೈನ್ ತರಗತಿಯ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಶಿಕ್ಷಕರು ಈ ಬಗ್ಗೆ ಧೈರ್ಯತುಂಬುವ ಮಾತುಗಳನ್ನಾಡಿದ್ದು , ಮಕ್ಕಳು ಯಾವುದೆ ಕಾರಣಕ್ಕೂ ಕಡಿಮೆ ಅಂಕ ಬಂತು ಎಂದು ವಿಚಲಿತರಾಗಬೇಡಿ ಭವಿಷ್ಯ ಇರುವ ಮಕ್ಕಳು ಪರೀಕ್ಷೆಯನ್ನು ಧೈರ್ಯದಿಂದ ಎದುರಿಸಿ ಎಂದು ತರಗತಿಯಲ್ಲಿ ಮಕ್ಕಳಿಗೆ ಆತ್ಮಸ್ಥೈರ್ಯ ತುಂಬಲು ಇದೇ ವೇಳೆ ಪ್ರಯತ್ನಿಸಿದ್ದಾರೆ ಎಂದು ತಿಳಿದುಬಂದಿದೆ.

ಘಟನೆ ಸಂಬಂಧ ಪೊಲೀಸ್ ಠಾಣೆಯಲ್ಲಿ ಯಾವುದೇ ಪ್ರಕರಣ ದಾಖಲಾಗಿಲ್ಲ.

ಸಂದೇಶ್ ದಿ ಪ್ರಿನ್ಸ್ ಹೊಟೆಲ್‌ಗೆ ಪೊಲೀಸರ ಭೇಟಿ

ಸಿಬ್ಬಂದಿ ಗಂಗಾಧರ್ ಹೇಳಿಕೆ ದಾಖಲು ಮಾಡಿಕೊಳ್ಳುತ್ತಿರುವ ಪೊಲೀಸರು



ಮೈಸೂರು: ಹೊಟೆಲ್ ಸಿಬ್ಬಂದಿ ಮೇಲೆ ನಟ ದರ್ಶನ್ ಹಲ್ಲೆ ಆರೋಪ ಕೇಳಬಂದ ಹಿನ್ನಲೆ ಎಸಿಪಿ ನೇತೃತ್ವದಲ್ಲಿ ಸಂದೇಶ್ ದಿ ಪ್ರಿನ್ಸ್ ಹೊಟೆಗೆ ಪೊಲೀಸರ ಭೇಟಿ ನೀಡಿದ್ದು ತಪಾಸಣೆ ಮಾಡುತ್ತಿದ್ದಾರೆ.

ನಟ ದರ್ಶನ್ ಅವರು 'ಸಂದೇಶ್ ದಿ ಪ್ರಿನ್ಸ್' ಹೊಟೆಲ್ ಕಾರ್ಮಿಕನ ಮೇಲೆ ಹಲ್ಲೆ ಮಾಡಿದ್ದರು ಎಂದು ಆರೋಪಿಸಿ ಈ ಬಗ್ಗೆ ತನಿಖೆ ನಡೆಸಬೇಕೆಂದು ನೆನ್ನೆ ಇಂದ್ರಜಿತ್ ಲಂಕೇಶ್ ಗೃಹ ಸಚಿವ ಬಸವ ರಾಜ್ ಬೊಮ್ಮಾಯಿ ಬಳಿ ದೂರು ಕೊಟ್ಟಿದ್ದರು. ಇದರ ಬೆನ್ನಲ್ಲೇ ತನಿಖೆ ನಡೆಸುವಂತೆ ಗೃಹ ಸಚಿವರು ಆದೇಶಿಸಿದ್ದರು. ಹೀಗಾಗಿ ಗಲಾಟೆ ಆಗಿದ್ದರ ಬಗ್ಗೆ ಹೊಟೆಲ್ ಮಾಲೀಕ ಸಂದೇಶರಿಂದ ಪೊಲೀಸರು ಮಾಹಿತಿ ಕಲೆ ಹಾಕುತ್ತಿದ್ದಾರೆ. ಶಶಿಧರ್– ದೇವರಾಜ ವಿಭಾಗದ ಎಸಿಪಿ. ಇನ್ಸ್ಪೆಕ್ಟರ್ ಶ್ರೀಕಾಂತ್ ಉಪಸ್ಥಿತರಿದ್ದಾರೆ.

ಎಸಿಪಿ ಶಶಿಧರ್ ಅವರು ಹೋಟೆಲ್ ನಲ್ಲಿ ಸಿಸಿಟಿವಿ ಫುಟೇಜ್ ಪರಿಶೀಲನೆ ನಡೆಸುತ್ತಿದ್ದಾರೆ. ಸಿಸಿಟಿವಿ ಫುಟೇಜ್, ಹೋಟೆಲ್ ಸಿಬ್ಬಂದಿಯಿಂದ ಮಾಹಿತಿ ಪಡೆಯುತ್ತಿರುವ ಪೊಲೀಸರು. ಈಗಾಗಲೇ ಸಿಸಿಟಿವಿ ಫುಟೇಜ್ ಡಿಲಿಟ್ ಆಗಿದೆ ಎಂದಿರುವ ಹೋಟೆಲ್ ಮಾಲೀಕ ಸಂದೇಶ್. ನಜರ್‌ಬಾದ್ ಪೊಲೀಸ್ ಠಾಣಾ ವ್ಯಾಪ್ತಿಯ ಸಂದೇಶ್ ದಿ ಪ್ರಿನ್ಸ್ ಹೋಟೆಲ್ ಇದೆ. ಇನ್ನು ಹಲ್ಲೆಗೊಳಗಾಗಿದ್ದಾರೆ ಎನ್ನಲಾದ ಸಿಬ್ಬಂದಿ ಗಂಗಾಧರ್ ಹೇಳಿಕೆ ದಾಖಲು ಮಾಡಿಕೊಳ್ಳುತ್ತಿದ್ದಾರೆ.

ಹೆಣದ ಮೇಲಿನ ಚಿನ್ನ ಕದ್ದ ಆಸ್ಪತ್ರೆ ಸಿಬ್ಬಂದಿ ?

ಮೈಸೂರು : ಕರೋನಾದಿಂದ ಮೃತರಾದವರ ಚಿನ್ನದ ಸರ ನಾಪತ್ತೆಯಾಗಿದೆ.ನಗರದ ಎಂ.ಕೆ.ಯಶವಂತ್ ಕುಮಾರ್ ಎಂಬವರಿಂದ ಮೈಸೂರಿನ ಖಾಸಗಿ ಆಸ್ಪತ್ರೆ ಸಿಬ್ಬಂದಿ ವಿರುದ್ಧ ಪ್ರಕರಣ ದಾಖಲಾಗಿದ್ದು, ತಾಯಿ ಗೌರಮ್ಮ ಜೆ.ಪಿ.ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು.

ಚಿಕಿತ್ಸೆ ಫಲಕಾರಿಯಾಗದೆ ಮೃತರಾಗಿದ್ದರು. ಅವರು 4 ಚಿನ್ನದ ಬಳೆ ಒಂದು ಉಂಗುರ, 2 ಓಲೆ ಮತ್ತು ಕೊರಳಿನಲ್ಲಿ ಒಂದು ಚಿನ್ನದ ಸರ ಧರಿಸಿದ್ದರು.

ಬಿಲ್ ಪಾವತಿಸಿದ ನಂತರ ನಿಮ್ಮ ತಾಯಿಯವರ ಒಡವೆಗಳನ್ನು ನೀಡುತ್ತೇವೆ ಎಂದಿದ್ದ ಆಸ್ಪತ್ರೆ ಸಿಬ್ಬಂದಿ. 25 ಗ್ರಾಂನ ಚಿನ್ನದ ಸರವನ್ನು ಬಿಟ್ಟು ಎಲ್ಲವನ್ನೂ ಹಿಂತಿರುಗಿಸಿದ ಸಿಬ್ಬಂದಿ.

ಸರದ ಬಗ್ಗೆ ನಮಗೆ ಗೊತ್ತಿಲ್ಲ ಎನ್ನುತ್ತಿರುವ ಆಸ್ಪತ್ರೆ ಸಿಬ್ಬಂದಿಗಳು ಈ ಸಂಬಂಧ ವಿದ್ಯಾರಣ್ಯಪುರಂ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

40 ದಿನಗಳಲ್ಲಿ ಬ್ಯಾಡರಹಳ್ಳಿ ಕೆರೆಗೆ ಬಾಗಿನ: ಶಾಸಕ ಅನ್ನದಾನಿ

ಹಲಗೂರು : ಮುಂದಿನ ನಲವತ್ತು ದಿನಗಳಲ್ಲಿ ಬ್ಯಾಡರಹಳ್ಳಿ ಕೆರೆ ಸೇರಿದಂತೆ ಎಂಟು ಕೆರೆ–ಕಟ್ಟೆಗಳು ತುಂಬಲಿದ್ದು, ಸಾರ್ವಜನಿಕರು ಮತ್ತು ಮುಖಂಡರೊಡನೆ ಬಾಗಿನ ಅರ್ಪಿಸಲಾಗುವುದು ಎಂದು ಶಾಸಕ ಡಾ.ಕೆ. ಅನ್ನದಾನಿ ತಿಳಿಸಿದ್ದಾರೆ.

ಸಮೀಪದ ಮಡಹಳ್ಳಿ ಗ್ರಾಮದಲ್ಲಿ 7.8 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿರುವ ಮಡಹಳ್ಳಿ ಏತ ನೀರಾವರಿ ಯೋಜನೆ ಉದ್ಘಾಟಿಸಿ ಅವರು ಮಾತನಾಡುತ್ತಾ ಶಿಂಷಾ ನದಿಯಿಂದ ಏತ ನೀರಾವರಿ ಮೂಲಕ ನಾಲ್ಕು ಕ್ಯೂಸೆಕ್ಸ್ ನೀರು ಪಡೆದು ಈ ಭಾಗದ ಬ್ಯಾಡರಹಳ್ಳಿ ಕೆರೆ, ಹಳ್ಳು ಕೊಳ್ಳಿ, ಗಿಂಡಿ ಕೆರೆ, ವಡ್ಡನ ಕಟ್ಟೆ, ಮುಳ್ಳಯ್ಯನ ಕಟ್ಟೆ, ಕರಲಕಟ್ಟೆ, ಸೇರಿದಂತೆ ಎಂಟು ಕೆರೆ ಮತ್ತು ಕಟ್ಟೆ ಗಳನ್ನು ತುಂಬಿಸುವ ಯೋಜನೆ ಇದಾಗಿದೆ. ಇದರಿಂದಾಗಿ ಈ ಭಾಗದಲ್ಲಿ ಅಂತರ್ಜಲ ಹೆಚ್ಚಾಗಿ ರೈತರು ಕೃಷಿ ಮಾಡಲು ಸಹಕಾರಿ ಯಾಗಲಿದೆ ಎಂದರು.

ಈ ಭಾಗದಲ್ಲಿ ಅಂತರ್ಜಲ ಹೆಚ್ಚಾಗಿ ರೈತರು ಕೃಷಿ ಮಾಡಲು ಸಹಕಾರಿಯಾಗಲಿದೆ

ಈ ಭಾಗದ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕೂಗಳತೆ ದೂರದಲ್ಲಿಯೇ ಶಿಂಷಾ ನದಿ ಹರಿ ದರೂ ಹಲಗೂರು ಹೋಬಳಿ ನೀರಾವರಿ ಯಿಂದ ಸಂಪೂರ್ಣ ವಂಚಿತವಾಗಿರುವ ಪ್ರದೇಶವಾಗಿದೆ ಎಂದು ಶಾಸಕ ಡಾ.ಕೆ. ಅನ್ನದಾನಿ ಬೇಸರ ವ್ಯಕ್ತಪಡಿಸಿದರು.

ಹಲಗೂರು ಹೋಬಳಿಯ ನೂರಕ್ಕೂ ಹೆಚ್ಚು ಕೆರೆ ತುಂಬಿಸುವ ಮತ್ತು ಹನಿ ನೀರಾವರಿ ಕಾಮಗಾರಿ ಆರಂಭಿಸಲು ಹದಿನೈದು ಸಾವಿರ ಎಕರೆ ಸರ್ವೇ ಕಾರ್ಯ ಮುಗಿದಿದ್ದು, ಹತ್ತು ಸಾವಿರ ಎಕರೆ ಸರ್ವೇ ಕಾರ್ಯ ಆಗಬೇಕಿದೆ. ಮೂರು ತಿಂಗಳಲ್ಲಿ ಸರ್ವೇ ಕಾರ್ಯ ಮುಗಿಯಲಿದ್ದು, ಬಹು ನಿರೀಕ್ಷಿತ ಹನಿ ನೀರಾವರಿ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಈ ಭಾಗದ ಸಾರ್ವಜನಿಕರಿಗೆ ಅನುಕೂಲ ಆಗಲೆಂದು ಹತ್ತು ವರ್ಷಗಳ ಹಿಂದೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾ ಗಿದ್ದು, ಬಹಳ ವರ್ಷಗಳಿಂದ ನೆನೆಗುದಿಗೆ ಬಿದ್ದಿದೆ. ಕೂಡಲೇ ಕಟ್ಟಡ ನಿರ್ಮಾಣ ಕಾಮಗಾರಿ ಆರಂಭಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಬ್ಯಾಡರಹಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ನಿಂಗಮ್ಮ, ಉಪಾಧ್ಯಕ್ಷೆ ಸಹನಾ, ಸದಸ್ಯರಾದ ಸಿದ್ದಯ್ಯ, ಕೆ.ಬಿ.ಸ್ವಾಮಿ, ಮುಖಂಡರಾದ ಮಲ್ಲೇಗೌಡ, ತಮ್ಮಣ್ಣಗೌಡ, ಕುಂತೂರು ಸೋಮಶೇಖರ್, ಸಿದ್ದಾಚಾರಿ, ಚಿಂದಹಳ್ಳಿ ಶ್ರೀಧರ್ ಸೇರಿದಂತೆ ಇತರರಿದ್ದರು.

ಕೃಷಿ ಮಾಹಿತಿ ಉಳ್ಳ ರಥಕ್ಕೆ ಶಾಸಕ ಡಿ.ಸಿ.ತಮ್ಮಣ್ಣ ಚಾಲನೆ ಇಂದು

ಮದ್ದೂರು: ಪಟ್ಟಣದ ಶ್ರೀ ಉಗ್ರ ನರಸಿಂಹಸ್ವಾಮಿ ದೇಗುದಲ್ಲಿ ಆವರಣದಲ್ಲಿ ಜು.17 ರಂದು ಬೆಳಗ್ಗೆ 11 ಗಂಟೆಗೆ ಕೃಷಿ ಮಾಹಿತಿ ಉಳ್ಳ ರಥಕ್ಕೆ ಶಾಸಕ ಡಿ.ಸಿ.ತಮ್ಮಣ್ಣ ಚಾಲನೆ ನೀಡಲಿದ್ದಾರೆಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಎಸ್.ಶ್ರೀನಾಥ್ ತಿಳಿಸಿದರು.

2021–22 ನೇ ಸಾಲಿನ ಕೃಷಿ ಅಭಿಯಾನ ಕಾರ್ಯಕ್ರಮದಡಿ ವಿವಿಧ ಇಲಾಖೆಯ ಸಹಯೋಗದೊಂದಿಗೆ ತಾಲೂಕಿನ ರೈತರಿಗೆ ದೊರೆಯುವ ಸವಲತ್ತು ಮತ್ತು ತಾಂತ್ರಿಕ ಮಾಹಿತಿಗಳ ಕೃಷಿ ಮಾಹಿತಿ ರಥವನ್ನು ಆಯೋಜಿಸಿದ್ದು, ತಾಲೂಕಿನ ವಿವಿಧ ಗ್ರಾಮಗಳಿಗೆ ಆಗಮಿಸುವ ರಥಯಾತ್ರೆಯ ಪ್ರಯೋಜನವನ್ನು ರೈತರು ಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ಮನವಿ ಮಾಡಿದರು.

50 ಲಕ್ಷ ವೆಚ್ಚದ ಕಾಮಗಾರಿಗೆ ಶಾಸಕ ಡಿ.ಸಿ.ಟಿ.ಚಾಲನೆ

ಬೆಸಗರಹಳ್ಳಿ ಗ್ರಾಮದಲ್ಲಿ ರಸ್ತೆ ಅಭಿವೃದ್ಧಿ ಕಾಮ ಗಾರಿ ಶಾಸಕ ಡಿ.ಸಿ. ತಮ್ಮಣ್ಣ ಚಾಲನೆ ನೀಡಿದರು. ರೇಖಾ ವೆಂಕಟೇಶ್, ಲೋಕೇಶ್, ನಾಗ ರಾಜುಮೂರ್ತಿ, ಕೋಣಸಾಲೆ ಮಧು, ಮುತ್ತು ರಾಜು, ಅಭಿಷೇಕ್, ರವಿ, ಕೃಷ್ಣೇಗೌಡ ಇದ್ದರು.

ಮದ್ದೂರು : ಗ್ರಾಮಾಂತರ ಪ್ರದೇಶಗಳ ಅಭಿವೃದ್ಧಿಗಾಗಿ ವಿಶೇಷ ಅನುದಾನಗಳನ್ನು ತಂದು ಸಮಗ್ರವಾಗಿ ಅಭಿವೃದ್ಧಿ ಮಾಡಲಾಗುತ್ತಿದೆ ಎಂದು ಶಾಸಕ ಡಿ.ಸಿ.ತಮ್ಮಣ್ಣ ತಿಳಿಸಿದರು.

ತಾಲೂಕಿನ ಚಾಮನಹಳ್ಳಿ, ಕೊತ್ತನಹಳ್ಳಿ, ಪಣ್ಣೆದೊಡ್ಡಿ, ಬೆಸಗರಹಳ್ಳಿ ಮಸೀದಿ, ಕೆಂಚೇಗೌಡನದೊಡ್ಡಿ ಗ್ರಾಮಗಳಲ್ಲಿ ಅಂದಾಜು 50 ಲಕ್ಷ ರೂಪಾಯಿ ವೆಚ್ಚದ ಕಾಮಗಾರಿಗೆ ಶುಕ್ರವಾರ ಚಾಲನೆ ನೀಡಿ ಮಾತನಾಡಿದರು.

ಗ್ರಾಮಾಂತರ ಪ್ರದೇಶದಲ್ಲಿರುವ ಕೆರೆಗಳು, ರಸ್ತೆಗಳು, ಚರಂಡಿಗಳು ಸೇರಿದಂತೆ ಕುಡಿಯುವ ನೀರಿಗೆ ತೊಂದರೆಯಾಗದಂತೆ ಕೋಟ್ಯಂತರ ರೂಪಾಯಿ ಅನುದಾನವನ್ನು ತಂದು ಅಭಿವೃದ್ಧಿ ಮಾಡುವ ಮೂಲಕ ಜನರಿಗೆ ಯಾವುದೇ ತೊಂದರೆಯಾಗದಂತೆ ಕ್ರಮಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಗ್ರಾಪಂ ಅಧ್ಯಕ್ಷೆ ರೇಖಾವೆಂಕಟೇಶ್, ಸದಸ್ಯರಾದ ಲೋಕೇಶ್, ನಾಗರಾಜುಮೂರ್ತಿ, ಕಾವ್ಯರವಿ, ಮುಖಂಡರಾದ ವೆಂಕಟೇಶ್, ಕೋಣಸಾಲೆ ಮಧು, ಮುತ್ತುರಾಜು, ಅಭಿಷೇಕ್‌ಗೌಡ, ರವಿ, ಕೃಷ್ಣೇಗೌಡ, ಪ್ರಸನ್ನ ಇದ್ದರು.

ಎಸ್ಸೆಸ್ಸೆಲ್ಸಿ ಪರೀಕ್ಷೆ ಹಿನ್ನೆಲೆ: ಶಿಕ್ಷಣ ಇಲಾಖೆಯಿಂದ ಮುಂಜಾಗೃತ ಕ್ರಮ

19 ರಿಂದ 22ರವರೆಗೆ ಪರೀಕ್ಷೆ: ತಹಸೀಲ್ದಾರ್ ವಿಜಯ್‌ಕುಮಾರ್

ಮದ್ದೂರು : ಕೋವಿಡ್ ಹಿನ್ನೆಲೆಯಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯನ್ನು ನಡೆಸಲು ಎಲ್ಲಾ ರೀತಿಯ ಮುಂಜಾಗೃತ ಕ್ರಮಗಳನ್ನು ಶಿಕ್ಷಣ ಇಲಾಖೆಯಿಂದ ಹಮ್ಮಿಕೊಳ್ಳಲಾಗಿದೆ ಎಂದು ತಹಸೀಲ್ದಾರ್ ವಿಜಯ್‌ಕುಮಾರ್ ತಿಳಿಸಿದರು.

ಜು.19 ರಿಂದ 22 ರವರೆಗೆ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಯಲ್ಲಿ 3381 ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದು 30 ವಿದ್ಯಾರ್ಥಿಗಳು ಹೊರ ಜಿಲ್ಲೆಯಿಂದ ಬಂದವರಾಗಿದ್ದಾರೆ. 27 ಪರೀಕ್ಷಾ ಕೇಂದ್ರಗಳು ಹಾಗೂ 2 ಹೆಚ್ಚುವರಿ ಮೀಸಲು ಕೇಂದ್ರ ರಚಿಸಲಾಗಿದೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ನಗರ ವ್ಯಾಪ್ತಿಯಲ್ಲಿ ಪುರ ಸಭೆ ಹಾಗೂ ಗ್ರಾಮೀಣ ಭಾಗಗಳಲ್ಲಿ ಗ್ರಾಪಂನ ಮೂಲಕ ಸ್ಯಾನಿಟೈಜರ್ ಸಿಂಪರಣೆ ಮಾಡಲು ವ್ಯವಸ್ಥೆ ಮಾಡಲಾಗಿದೆ ಎಂದು ಶುಕ್ರವಾರ ಪ್ರತಿಕಾಗೋಷ್ಠಿಯಲ್ಲಿ ತಿಳಿಸಿದರು.

ಪ್ರತೀ ಕೇಂದ್ರದಲ್ಲಿ 12 ವಿದ್ಯಾರ್ಥಿಗಳಿಗೆ, 1 ಕೊಠಡಿಯನ್ನು ಐಸೋಲೇಷನ್ ಆಗಿ ರಚಿಸಿದ್ದು ಪರೀಕ್ಷೆಗೆ ಹಾಜರಾಗುವ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆಗಾಗಿ ದಾದಿಯರು ಮತ್ತು ಆಶಾ ಕಾರ್ಯ ಕರ್ತೆಯನ್ನು ನಿಯೋಜಿಸಲಾಗಿದೆ ಎಂದರು.

ಪರೀಕ್ಷಾ ಕಾರ್ಯ ನಿಷ್ಪಕ್ಷಪಾತ ಮತ್ತು ಸುರಕ್ಷವಾಗಿ ನಡೆಯಲು ಪ್ರತಿ ಕೇಂದ್ರಕ್ಕೆ ಸ್ಥಾನಿಕ ಜಾಗೃತ ದಳದ ಅಧಿಕಾರಿಗಳನ್ನು ಸಾಮಾಜಿಕ ಅಂತರ ಪಾಲನೆಗಾಗಿ ದೈಹಿಕ ಶಿಕ್ಷಣ ಶಿಕ್ಷಕರನ್ನು, ಮಕ್ಕಳು ಮತ್ತು ಸಿಬ್ಬಂದಿಗಳಿಂದ ಮೊಬೈಲ್ ವಶಕ್ಕೆ ಪಡೆಯಲು ಮೊಬೈಲ್ ಸ್ವಾಧೀನಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಬಂದೋಬಸ್ತ್‌ಗಳಾಗಿ ಪೊಲೀಸ್ ಇಲಾಖೆಗೆ ಕೋರಲಾಗಿದೆ ಎಂದರು.

ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಹಾಜರಾಗಲು 8 ರಿಂದ 10 ಗಂಟೆ ಅವಧಿಯಲ್ಲಿ ಹೆಚ್ಚಿನ ಕೆಎಸ್‌ಆರ್‌ಟಿಸಿ ಬಸ್ ಸಂಚಾರಕ್ಕೆ ಅನುವು ಮಾಡಲಾಗಿದೆ ಎಂದು ತಿಳಿಸಿದರು. ಬಿಇಒ ಮಹಾದೇವ್ವ, ಶಿಕ್ಷಕ ಬಿ.ಪಿ.ಹಳ್ಳಿನಾರಾಯಣ್ ಇದ್ದರು.

ನಿತ್ಯ ಸಚಿವ ಕೆ.ವಿ.ಶಂಕರಗೌಡರ ಸಾಧನೆಗಳು ಕಣ್ಣಮುಂದಿವೆ–ವಿರೂಪಾಕ್ಷೇಗೌಡ

ಮಂಡ್ಯ: ನಿತ್ಯ ಸಚಿವ ಕೆ.ವಿ.ಶಂಕರಗೌಡರ ಸಾಧನೆಗಳು ನಮ್ಮ ಕಣ್ಣ ರಾರಾಜಿಸುತ್ತಿವೆ, ಸದಾ ಅವಿಸ್ಮರಣೀಯ ಚೇತನರಾಗಿದ್ದಾರೆ ಎಂದು ಕೆ.ಎಸ್.ಆರ್.ಪಿಯ ಡಿವೈಎಸ್ಪಿ ಕೆ.ಆರ್. ವಿರೂಪಾಕ್ಷೇಗೌಡ ಹೇಳಿದರು.

ನಗರದ ಶಂಕರನಗರದಲ್ಲಿರುವ ಶ್ರೀಗೀತಾ ಎಕ್ಸಲೆನ್ಸ್ ಸಂಯುಕ್ತ ಪದವಿಪೂರ್ವ ಕಾಲೇಜಿನಲ್ಲಿ ಕೃಷಿಕ ಲಯನ್ಸ್ ಸಂಸ್ಥೆ ಆಯೋಜಿಸಿದ್ದ ನಿತ್ಯ ಸಚಿವ ಕೆ.ವಿ.ಶಂಕರಗೌಡರ ಜನ್ಮದಿನೋತ್ಸವ ಅಂಗವಾಗಿ ಕೆ.ವಿ. ಶಂಕರಗೌಡ ಪ್ರಶಸ್ತಿ ಪ್ರಧಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯಪೂರ್ವದ 40ರ ದಶಕದಿಂದ 1980ರ ವರಗೆ ಸರಿಸಮಾರು 40 ವರ್ಷಗಳ ಕಾಲ ಮಂಡ್ಯ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿದ ಮಹಾಚೇತನ ನಮಗೆ ಸ್ಫೂರ್ತಿಯಾಗಿದ್ದಾರೆ, ಸಹಕಾರ–ಶಿಕ್ಷಣ, ಸಾಂಸ್ಕೃತಿಕ ಲೋಕ, ರಾಜಕಾರಣದಲ್ಲಿನ ಅಮೂಲಾಗ್ರ ಕೊಡುಗೆಗಳು, ಸಾಧನೆಗಳು ನಮ್ಮ ಕಣ್ಣಮುಂದಿವೆ ಎಂದು ಸ್ಮರಿಸಿದರು.

ರಾಷ್ಟ್ರಕವಿ